ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಕೋವಿಡ್ ಲಸಿಕೆ ಸುರಕ್ಷತೆ ಬಗ್ಗೆ ಕ್ರಮ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

73 (197) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ನಿವಾರಣೆಗಾಗಿ ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಸಾರ್ವಜನಿಕರಿಗೆ ನೀಡುತ್ತಿರುವ ಲಸಿಕೆ ತೆಗೆದುಕೊಳ್ಳಲು ಜನ ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಲಸಿಕೆ ಸುರಕ್ಷಿತವಲ್ಲ, ಇದರಿಂದ ಅಡ್ಡ ಪರಿಣಾಮಗಳು ಉಂಟಾಗುತ್ತಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು ;

(ಇ) ಲಸಿಕೆಯ ಬಗ್ಗೆ ಜನರಲ್ಲಿ ಭಯ ಉಂಟಾಗಿದ್ದು, ಈ ಭಯ ನಿವಾರಣೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?